**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1251/2021**

ಪಿ.ಡಬ್ಲ್ಯೂ: 5

ಸಿ.ಡಬ್ಲ್ಯೂ: 5

ಸಾಕ್ಷಿದಾರರ ಹೆಸರು : ಕುಪ್ಪನ್

ತಂದೆಯ ಹೆಸರು: : ನಟೇಶ್

ವಯಸ್ಸು : **40 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಉಪ್ಪಾರ ಬೀರನಹಳ್ಳಿ

**ದಿನಾಂಕ:14-10-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 4-5 ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಗ್ರಾಮದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3 (ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-4 ರಿಂದ 6ರ ಛಾಯಚಿತ್ರಗಳಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: 17-03-2021 ರಂದು ಬೆಳಿಗ್ಗೆ 10-30 ರಿಂದ 10-45 ಸಮಯದಲ್ಲಿ ಕರಕುಚ್ಚಿ ಎ ಕಾಲೋನಿಯ ಬಾಡಿಗೆ ಮನೆಯಲ್ಲಿ ವಾಸವಾಗಿರುವ ತ್ರಿವೇಣಮ್ಮನವರ ಮನೆಯ ಮುಂದೆ ಪೊಲೀಸರು ಕಳ್ಳತನದ ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಹಾಕಿರುತ್ತೀರಾ ಎಂದರೆ ಸಾಕ್ಷಿ ಸಹಿ ಹಾಕಿರುತ್ತೇನೆ, ಆದರೆ ಯಾವುದೇ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ನಿಮ್ಮ ಸಮಕ್ಷಮ ಬೆಳ್ಳಿಯ ವಸ್ತುಗಳು ನಗದು ಹಣ ಹಾಗೂ ಕೃತ್ಯಕ್ಕೆ ಬಳಸಿದ

ಒಂದು ಸ್ಪಾನರ್, ಒಂದು ಸ್ಕ್ರೂಡ್ರೈವರ್ ಆ್ಯಕ್ಸಲ್ ಬ್ಲೇಡ್ ನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

ಸಾಕ್ಷಿ ನ್ಯಾಯಾಲಯದ ಮುಂದಿರುವ ಎಂ ಒ 1 ರಿಂದ 3 ನ್ನು ನೋಡಿ ಗುರುತಿಸಿರುವುದಿಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇರುವುದಿಲ್ಲ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**